ಓ ಎಸ್ **111/2017**

ಡಿ ಡಬ್ಲ್ಯೂ **-1**

**ದಿಃ 20.07.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.**

ಮುಂದುವರೆದ ಪಾಟೀ ಸವಾಲುಃ ವಾದಿ ಪರ ಶ್ರೀ ಎಂ ವಿ ಎಸ್ ವಕೀಲರಿಂದಃ

ಈ ದಾವೆಯಲ್ಲಿ ಇರುವ ವಾದಿಗಳು ಮತ್ತು ಪ್ರತಿವಾದಿಗಳು ಯಾರು ನನಗೆ ಗೊತ್ತಿರುವುದಿಲ್ಲ. ಈ ದಾವೆ ಹಾಕಿದ ನಂತರ ನನಗೆ ಪ್ರತಿವಾದಿಗಳ ಮತ್ತು ವಾದಿಗಳ ಬಗ್ಗೆ ಗೊತ್ತಾಗಿರುತ್ತದೆ . ಈ ದಾವೆ ಹೂಡಿದ ನಂತರ ನನಗೆ ಈ ವಿಚಾರ ಗೊತ್ತಾಗಿರುತ್ತದೆ . ವಾದಿ ಮತ್ತು ಪ್ರತಿವಾದಿಗಳು ನನಗೆ 20003 ನೇ ಇಸವಿಯಿಂದ ತೊಂದರೆ ಕೊಡುತ್ತಿದ್ದಾರೆ. ಅವರು ತೊಂದರೆ ಕೊಡುತ್ತಿರುವ ಸಂದರ್ಭ ಮತ್ತು ದಿನದಿಂದ ನಾನು ಯಾವುದೇ ದಾವೆಯನ್ನು ವಾದಿ ಮತ್ತು ಪ್ರತಿವಾದಿಗಳ ವಿರುದ್ದ ಹೂಡಿರುವುದಿಲ್ಲ .

ದಾವಾ ಆಸ್ತಿಯನ್ನು ಯಾರ ಕಡೆಯಿಂದ ಖರೀದಿ ಮಾಡಿದ್ದೀರಾ ಎಂದರೆ ಸಾಕ್ಷಿ ನಾನು ದಾವಾ ಆಸ್ತಿಯನ್ನು ಖರೀದಿ ಮಾಡಿರುವುದಿಲ್ಲ , ಆದರೆ ಸದರಿ ಆಸ್ತಿಯಲ್ಲಿ 40 ವರ್ಷಗಳಿಂದ ವ್ಯವಸಾಯ ಮಾಡುತ್ತಿದ್ದೇನೆ . ದಾವಾ ಆಸ್ತಿ ನನಗೆ ಯಾವ ಸರ್ಕಾರದಿಂದಲೂ ಮಂಜೂರು ಆಗಿರುವುದಿಲ್ಲ ಎಂದರೆ ಸರಿ . ಮೊದಲಿಗೆ ಯಲ್ಲಯ್ಯ ನವರ ಹೆಸರಿನಲ್ಲಿ ಖಾತೆ ಪಹಣಿ ಇತ್ತು ಎಂದರೆ ನನಗೆ ಗೊತ್ತಿಲ್ಲ .

ವಾದಿ ಮತ್ತು ಪ್ರತಿವಾದಿಗಳ ಕುಟುಂಬದಲ್ಲಿ ವಿಭಾಗ ಆಗಿರುವುದಿಲ್ಲ ಎಂದರೆ ನನಗೆ ಗೊತ್ತಿಲ್ಲ. ಯಲ್ಲಯ್ಯ ನವರಿಗೆ ಮಂಜೂರಾತಿ ಆಗಿರುವ ಬಗ್ಗೆ ದಾಖಲಾತಿಗಳನ್ನು ನೋಡಿರುತ್ತೀರಾ ಎಂದರೆ ನಾನು ದಾವೆ ಹಾಕಿದ ನಂತರ ಅದರ ಬಗ್ಗೆ ನನಗೆ ಗೊತ್ತಾಗಿರುತ್ತದೆ .

ಮುಂದುವರೆದ ಪಾಟೀ ಸವಾಲಿಗಾಗಿ ಕಾಲಾವಕಾಶ ಕೋರಿದ್ದು, ಕೋರಿಕೆಯ ಮೇರೆಗೆ ಮುಂದೂಡಲಾಯಿತು.

**(ಉಖ್ತ ಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸ ಇ ಎ ಓ**

**ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರು,**

**ಮಾಗಡಿ.**